## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013-14ನೇ ಸಾಲಿನಲ್ಲಿ ಸೌರ ಬೆಳಕು ಯೋಜನೆಯಡಿ ಶೇ. 50ರಷ್ಟು ಅನುದಾನ ಬಿಡುಗಡೆ – ಕುರಿತು.

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 241 ಎಎಫ್ಎನ್ 2013 ದಿನಾಂಕ : 01.08.2013 ಕ್ರ.ಸಂ. VII (45)

2) ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 5 ಗ್ರಾಇಂಕಾ 2009 ದಿನಾಂಕ : 14.07.2009

3) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ 16 ಜೈಅಯೋ 2012 ದಿನಾಂಕ : 07.07.2012 ಮತ್ತು 02.02.2013

4) ಸರ್ಕಾರಿ ಪತ್ರ ಸಂಖ್ಯೆ : ಗ್ರಾಅಪ/23/ಜೈಅಯೋ/2013 ದಿನಾಂಕ : 21.10.2013

**ಪ್ರಸ್ತಾವನೆ :**

2013-14ನೇ ಸಾಲಿನ ರಾಜ್ಯ ಆಯವ್ಯಯದಡಿ, ಉಲ್ಲೇಖ (1)ರ ಸರ್ಕಾರದ ಆದೇಶದರಿತ್ಯ ಲೆಕ್ಕ ಶೀರ್ಷಿಕೆ 2810-00-101-0-91 (2810-01-198-1-01) ಯೋಜನೆಯಡಿ ₹ 310.00 ಲಕ್ಷಗಳ ಅನುದಾನವನ್ನು, ಪ್ರಾಯೋಗಿಕ ಜಿಲ್ಲಾ ಪಂಚಾಯಿತಿಗಳಿಗೆ ಆಯ್ಕೆಯಾದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಿಗೆ ಸೌರ ಬೀದಿ ದೀಪಗಳನ್ನು ಅಳವಡಿಸುವ ಸಲುವಾಗಿ, ಹಂಚಿಕೆ ಮಾಡಲಾಗಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಸೌರ ಬೆಳಕು ಯೋಜನೆಯನ್ನು ಜಾರಿಗೊಳಿಸಲಾಗಿದೆ. ಉಲ್ಲೇಖ (3)ರ ಪತ್ರದಲ್ಲಿ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಉಲ್ಲೇಖ (4)ರ ಸರ್ಕಾರಿ ಪತ್ರದಲ್ಲಿ 2013-14ನೇ ಸಾಲಿನಲ್ಲಿ ಸೌರ ಬೆಳಕು ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರಾಯೋಜಿಕ 5 ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಭೌತಿಕ ಗುರಿಗಳನ್ನು ನಿಗದಿಪಡಿಸಲಾಗಿದೆ. ಪ್ರಯುಕ್ತ ಮೊದಲನೇ ಮತ್ತು ಎರಡನೇ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಜೈಅಯೋ 2013, ಬೆಂಗಳೂರು, ದಿನಾಂಕ 16.11.2013** (2)

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ₹ 150.00 ಲಕ್ಷಗಳನ್ನು (ರೂ. ಒಂದುನೂರ ಐವತ್ತು ಲಕ್ಷಗಳು ಮಾತ್ರ) ಮೊದಲ ಎರಡು ಕಂತಿನ ಅನುದಾನವನ್ನಾಗಿ 2013-14ನೇ ಸಾಲಿನ ಸೌರ ಬೆಳಕು ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ 2810-00-101-0-91 (2810-01-198-1-01) ಯೋಜನೆ ಅಡಿಯಲ್ಲಿ ಪ್ರಾಯೋಗಿಕವಾಗಿ ಆಯ್ಕೆಯಾದ ಈ ಕೆಳಕಂಡ ಜಿಲ್ಲಾ ಪಂಚಾಯಿತಗಳಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

| ಕ್ರ.ಸಂ | ಜಿಲ್ಲಾ ಪಂಚಾಯತ್ | ಬಿಡುಗಡೆ ಮಾಡಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|
| 01 | ಉತ್ತರ ಕನ್ನಡ | 30.00 |
| 02 | ಮಂಡ್ಯ | 30.00 |
| 03 | ಕೋಲಾರ | 30.00 |
| 04 | ಗದಗ | 30.00 |
| 05 | ಯಾದಗಿರಿ | 30.00 |
| | **ಒಟ್ಟು** | **150.00** |

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿರುತ್ತದೆ. ಸದರಿ ಅನುದಾನವನ್ನು 31ನೇ ಮಾರ್ಚ್ 2014ರೊಳಗೆ ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ಹಾಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ ಗ್ರಾಅಪ 489 ಪಿಬಿಎಸ್ 2013 ದಿನಾಂಕ 12.11.2013ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Hemalatha

(ಪಿ. ಹೇಮಲತ)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ, ಮಂಡ್ಯ, ಕೋಲಾರ, ಗದಗ ಮತ್ತು ಯಾದಗಿರಿ ಜಿಲ್ಲೆಗಳು.
3. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಉತ್ತರ ಕನ್ನಡ, ಮಂಡ್ಯ, ಕೋಲಾರ, ಗದಗ ಮತ್ತು ಯಾದಗಿರಿ ಜಿಲ್ಲೆಗಳು.
5. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ. 49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
6. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.